ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ 12 ಇಎಸ್‌ಟಿ(2)ಎ 2016

ನಿರ್ದೇಶಕರವರ ಕಛೇರಿ
ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ,
ಅರಮನೆ ರಸ್ತೆ, ಬೆಂಗಳೂರು,
ದಿನಾಂಕ: 16-07-2016.

## ಸುತ್ತೋಲೆ

ವಿಷಯ: 2016-17 ನೇ ಸಾಲಿನ ತಾಂತ್ರಿಕ ಶಿಕ್ಷಣ ಇಲಾಖೆಯ ಅಧಿಕಾರಿ/ಸಿಬ್ಬಂದಿಗಳ ವರ್ಗಾವಣೆಗೆ ಸಂಬಂಧಿಸಿದಂತೆ ಆನ್‌ಲೈನ್ ಮೂಲಕ ಬೋಧಕ/ಬೋಧಕೇತರ ಸಿಬ್ಬಂದಿ ವರ್ಗದವರ ದತ್ತಾಂಶ ದಾಖಲಿಸುವ ಬಗ್ಗೆ.

ಉಲ್ಲೇಖ: ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 118 ಟಿಇಸಿ 2016 ದಿ: 15-07-2016

*-*-*

ತಾಂತ್ರಿಕ ಶಿಕ್ಷಣ ಇಲಾಖೆಯ ಸಿಬ್ಬಂದಿಯವರ ವರ್ಗಾವಣೆ ನಿಯಂತ್ರಿಸುವ ಸಲುವಾಗಿ ಅಧಿನಿಯಮ 2012 ಮತ್ತು ನಿಯಮಗಳು 2013 ರನ್ನು ಹೊರಡಿಸಲಾಗಿರುತ್ತದೆ. ಉಲ್ಲೇಖಿತ ಸರ್ಕಾರದ ಪತ್ರದಲ್ಲಿ ವರ್ಗಾವಣೆ ನಿಯಮಗಳಲ್ಲಿನ ಸೆಕ್ಷನ್ 8 ರನ್ವಯ 2015-16ನೇ ಸಾಲಿಗೆ ತಾಂತ್ರಿಕ ಶಿಕ್ಷಣ ಇಲಾಖೆಯ ಅಧಿಕಾರಿ/ಸಿಬ್ಬಂದಿಗಳ ವರ್ಗಾವಣೆ ಪ್ರಕ್ರಿಯೆಯನ್ನು 2016 ರ ಆಗಸ್ಟ್ ಮಾಹೆಯೊಳಗೆ ಪೂರ್ಣಗೊಳಿಸತಕ್ಕದ್ದು ಎಂದು ಆದೇಶಿಸಲಾಗಿರುತ್ತದೆ.

ಈ ಕುರಿತಂತೆ ಸಿಬ್ಬಂದಿಯವರ ಮಾಹಿತಿಯನ್ನು ಸಂಗ್ರಹಿಸಬೇಕಾಗಿದ್ದು, ತಾಂತ್ರಿಕ ಶಿಕ್ಷಣ ಇಲಾಖೆಯ ಪ್ರಾಂಶುಪಾಲರು, ಬೋಧಕ ಹಾಗೂ ಬೋಧಕೇತರ ಸಿಬ್ಬಂದಿಗಳ ವೈಯಕ್ತಿಕ ವಿವರಗಳೂ ಸೇರಿದಂತೆ ಸೇವಾ ವಿವರಗಳನ್ನು ಸಂಗ್ರಹಿಸಿ ಸಿಬ್ಬಂದಿಯವರ ಮಾಹಿತಿಯನ್ನು ವರ್ಗಾವಣೆಗಳಿಗೂ ಒಳಗೊಂಡಂತೆ ಆಡಳಿತಾತ್ಮಕ ಹಾಗೂ ಶೈಕ್ಷಣಿಕ ಉದ್ದೇಶಗಳಿಗೆ ಬಳಸಲು ಅನುಕೂಲವಾಗುವಂತೆ ತಾಂತ್ರಿಕ ಶಿಕ್ಷಣ ಇಲಾಖೆಯ ವೆಬ್‌ಸೈಟ್‌ನಲ್ಲಿ ಇರುವ EMIS (Educational Management Information System) ತಂತ್ರಾಂಶದಲ್ಲಿ ಆನ್‌ಲೈನ್ ಮೂಲಕ ನಿಗದಿತ ನಮೂನೆಯಲ್ಲಿ ಪ್ರಾಂಶುಪಾಲರ ಉಸ್ತುವಾರಿಯಲ್ಲಿ ಎಂಟ್ರಿ ಮಾಡಬೇಕಾಗಿರುತ್ತದೆ. ಸಂಸ್ಥೆಗಳಿಗೆ ಈಗಾಗಲೇ ಒದಗಿಸಲಾಗಿರುವ User-id ಮತ್ತು Password ಬಳಸಿ EMIS ನಲ್ಲಿ Login ಆಗಿ ಲಿಂಕ್‌ಗಳ ಮೂಲಕ ಆಯಾ ಸಂಸ್ಥೆಗಳಲ್ಲಿ LIEN ಹೊಂದಿರುವ (ಅಂದರೆ ಸಂಸ್ಥೆಯಲ್ಲಿ ವೇತನವನ್ನು ಪಡೆಯುತ್ತಿರುವ) ಬೋಧಕ/ಬೋಧಕೇತರ ಸಿಬ್ಬಂದಿಗಳ (ಬೇರೆ ಸಂಸ್ಥೆಗೆ ನಿಯೋಜನೆ (ಡೆಪ್ಯುಟೇಷನ್) ಮೇರೆಗೆ ತೆರಳಿರುವ ಬೋಧಕ/ಬೋಧಕೇತರ ಸಿಬ್ಬಂದಿಗಳ ಮಾಹಿತಿಯನ್ನೊಳಗೊಂಡಂತೆ), ಎಲ್ಲಾ ಬೋಧಕ/ಬೋಧಕೇತರ ಸಿಬ್ಬಂದಿಗಳ ವಿವರಗಳನ್ನು ದಿ: 27-07-2016ರೊಳಗೆ ಅಪ್‌ಲೋಡ್ ಮಾಡಲು ಸೂಚಿಸಲಾಗಿದೆ ಹಾಗೂ ಯಾವುದೇ ಸಿಬ್ಬಂದಿಯ ಯಾವುದೇ ರೀತಿಯ ಮಾಹಿತಿ ಸಮರ್ಪಕವಾಗಿ ಒದಗಿಸದಿದ್ದಲ್ಲಿ ಅಥವಾ ತಪ್ಪು ಮಾಹಿತಿ ನೀಡಿದಲ್ಲಿ ಸಂಬಂಧಪಟ್ಟ ಸಿಬ್ಬಂದಿ ಮತ್ತು ಸಂಸ್ಥೆಯ ಮುಖ್ಯಸ್ಥರ ವಿರುದ್ಧ ಕೆ.ಸಿ.ಎಸ್(ಸಿಸಿಎ)1957ರ ಪ್ರಕಾರ ಶಿಸ್ತಿನ ಕ್ರಮಕ್ಕೆ ಗುರಿ ಪಡಿಸಲಾಗುವುದು ಎಂದು ಸೂಚಿಸಲಾಗಿದೆ.

ನಿರ್ದೇಶಕರು

ಪ್ರತಿ:

1. ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು ಇಲ್ಲಿನ ಎಲ್ಲಾ ಅಧಿಕಾರಿ /ಸಿಬ್ಬಂದಿಗಳಿಗೆ.
2. ಎಲ್ಲಾ ಸರ್ಕಾರಿ ಪಾಲಿಟೆಕ್ನಿಕ್/ ಇಂಜಿನಿಯರಿಂಗ್ ಕಾಲೇಜು/ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ ಪ್ರಾಂಶುಪಾಲರು (ಸಂಬಂಧಪಟ್ಟ ಸಂಸ್ಥೆಯ ಬೋಧಕ/ಬೋಧಕೇತರ ಸಿಬ್ಬಂದಿಗಳ ಗಮನಕ್ಕೆ ತರಲು ಸೂಕ್ತ ಕ್ರಮ ಕೈಗೊಳ್ಳತಕ್ಕದ್ದು).
3. ಇ-ಆಡಳಿತ. ಕೂಡಲೆ ವೆಬ್‌ಸೈಟ್ ನಲ್ಲಿ ಪ್ರಚುರ ಪಡಿಸಲು.
4. ನಿರ್ದೇಶಕರ ಆಪ್ತಶಾಖೆ.
5. ಕಛೇರಿ ಪ್ರತಿ.